**DECEMBER 11,2024**

**ALL INDIA RADIO- DHARWAD**

**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ನವ ಕರ್ನಾಟಕದ ಆವಿಷ್ಕಾರಕ್ಕೆ ಮುನ್ನುಡಿ** ಬರೆದ ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆ ಇಂದು ಸಾಯಂಕಾಲ ಮಂಡ್ಯ ಜಿಲ್ಲೆ ಮದ್ದೂರಿನ ಸೋಮನಹಳ್ಳಿಯಲ್ಲಿ ಜರುಗಲಿದೆ. ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಹಾಗೂ ಕೇಂದ್ರ ಸರ್ಕಾರದ ಪ್ರತಿನಿಧಿಯಾಗಿ ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಪಾಲ್ಗೊಳ್ಳಲಿದ್ದಾರೆ. ಮೂರು ಗಂಟೆಗೆ ಅಂತಿಮ ಸಂಸ್ಕಾರದ ವಿಧಿ ವಿಧಾನಗಳು ಆರಂಭಗೊಳ್ಳಲಿದ್ದು, ಇದಕ್ಕೂ ಮೊದಲು ಸ್ವಗ್ರಾಮ ಸೋಮನಹಳ್ಳಿಯಲ್ಲಿ ಸಾರ್ವಜನಿಕರಿಗೆ ಅಂತಿಮ ದರ್ಶನದ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಮಂಡ್ಯ ಜಿಲ್ಲಾಡಳಿತದ ವತಿಯಿಂದ ಸಾರ್ವಜನಿಕ ದರ್ಶನಕ್ಕೆ ಅನುಕೂಲವಾಗುವಂತೆ ಸಿದ್ಧತೆ ನಡೆಸಲಾಗಿದ್ದು, ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿದೆ. ಇಂದು ಬೆಳಗ್ಗೆ 8 ಗಂಟೆಗೆ ಬೆಂಗಳೂರಿನ ಸದಾಶಿವನಗರದ ನಿವಾಸದಿಂದ ಹೊರಟ ಪಾರ್ಥಿವ ಶರೀರದ ಅಂತಿಮ ಯಾತ್ರೆ ಮೈಸೂರು ಸರ್ಕಲ್, ಕೆಂಗೇರಿ, ಬಿಡದಿ, ರಾಮನಗರ ಮಾರ್ಗವಾಗಿ ಇತ್ತೀಚಿನ ಮಾಹಿತಿ ಬಂದಾಗ ಮಂಡ್ಯ ಜಿಲ್ಲೆ ಸಮೀಪಿಸಿದೆ. ಬಿಡದಿಯ ಬಿಜಿಎಸ್ ಸರ್ಕಲ್ ಹಾಗೂ ರಾಮನಗರ ಐಜೂರು ವೃತ್ತದಲ್ಲಿ ಅಭಿಮಾನಿಗಳು ಹಾಗೂ ಗಣ್ಯರು ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಗೌರವ ಸಮರ್ಪಿಸಿದರು. ರಸ್ತೆಯ ಇಕ್ಕೆಲಗಳಲ್ಲಿ ನೆರೆದ ಅಭಿಮಾನಿಗಳು ಅಗಲಿದ ನಾಯಕರಿಗೆ ಗೌರವ ಸಲ್ಲಿಸಿದರು.

<><><>

**ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ** ನಿಧನ ನೋವನ್ನುಂಟು ಮಾಡಿದ್ದು, ಅವರ ಅಗಲಿಕೆ ತುಂಬಲಾರದ ನಷ್ಟ ಎಂದು, 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಗೊ.ರು ಚನ್ನಬಸಪ್ಪ ಸಂತಾಪ ಸೂಚಿಸಿದ್ದಾರೆ. ಕನ್ನಡ ಭಾಷೆ ಹಾಗೂ ಸಾಹಿತ್ಯದ ಬಗ್ಗೆ ಅಪಾರ ಪ್ರೀತಿ ಹೊಂದಿದ್ದ ಕೃಷ್ಣ ಅವರು ತಮಗೆ ರಾಜ್ಯೋತ್ಸವ ಪ್ರಶಸ್ತಿ ಪ್ರದಾನಿಸಿರುವುದನ್ನು ಚಿಕ್ಕಮಗಳೂರಿನಲ್ಲಿ ಸ್ಮರಿಸಿದರು.

<><><>

**ಬೆಂಗಳೂರಿನ ಡಾನ್ ಬಾಸ್ಕೋ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ** ಸಂಸ್ಥೆಯಲ್ಲಿ ಇಂದು ಬೆಳಗ್ಗೆ, 7 ನೇ ಸಾಲಿನ ಪ್ರತಿಷ್ಠಿತ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ಗೆ ಚಾಲನೆ ದೊರೆಯಿತು. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ವಿಡಿಯೋ ಕಾನ್ಫರೆನ್ಸ್ ಮೂಲಕ ಹ್ಯಾಕಥಾನ್ ಗೆ ಚಾಲನೆ ನೀಡಿದರು. ಕೇಂದ್ರ ಶಿಕ್ಷಣ ಸಚಿವಾಲಯದ ನಾವಿನ್ಯ ಘಟಕ, ಇಂಡೋ ಟಿಬೆಟಿಯನ್ ಬಾರ್ಡರ್ ಪೊಲೀಸ್ ಸಹಯೋಗದಲ್ಲಿ ಬಾಹ್ಯಾಕಾಶ ತಂತ್ರಜ್ಞಾನ, ಸ್ಮಾರ್ಟ್ ಆಟೋಮೇಶನ್, ರೊಬೊಟಿಕ್ಸ್ ಹಾಗೂ ಡ್ರೋನ್ ತಂತ್ರಜ್ಞಾನ ವಿಭಾಗದಲ್ಲಿ ವಿವಿಧ ಸ್ಪರ್ಧೆಗಳು ಆಯೋಜಿತವಾಗಿವೆ. ಒಟ್ಟು 100 ವಿದ್ಯಾರ್ಥಿಗಳ 16 ತಂಡಗಳು ಸ್ಪರ್ಧೆಗಳಲ್ಲಿ ಭಾಗವಹಿಸಲಿವೆ. ಮೈಸೂರಿನ ನ್ಯಾಶನಲ್ ಇನ್ಸ್ಟಿಟ್ಯೂಟ್ ಆಫ್ ಎಂಜಿನಿರಿಂಗ್ ಕಾಲೇಜಿನಲ್ಲಿ ಯುವ ಸಮುದಾಯವನ್ನು ಉತ್ತೇಜಿಸುವ ಹ್ಯಾಕಥಾನ್ ನಲ್ಲಿ ದೇಶದ ವಿವಿಧೆಡೆಯ 168 ವಿದ್ಯಾರ್ಥಿಗಳ 28 ತಂಡಗಳು ಭಾಗವಹಿಸುತ್ತಿವೆ ಎಂದು ಪ್ರಾಚಾರ್ಯರಾದ ಡಾಕ್ಟರ್ ರೋಹಿಣಿ ನಾಗಪದ್ಮ ತಿಳಿಸಿದ್ದಾರೆ.

<><><>

**ಮಂಗಳೂರಿನ ಸಹ್ಯಾದ್ರಿ ಕಾಲೇಜ್ ಆಫ್ ಇಂಜಿನಿಯರಿಂಗ್,** ಸುರತ್ಕಲ್ ನಲ್ಲಿರುವ ಎನ್.ಐ.ಟಿ.ಕೆ ನ್ಯಾಶನಲ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಕರ್ನಾಟಕ ಹಾಗೂ ಅಮಲ್ ಜ್ಯೋತಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ಭಾಗವಾಗಿ ವಿವಿಧ ಸ್ಪರ್ಧೆಗಳು ನಡೆಯಲಿವೆ.

<><><>

**ಬೆಂಗಳೂರು ದಕ್ಷಿಣ ವಲಯ ವ್ಯಾಪ್ತಿಯಲ್ಲಿರುವ ಉದ್ಯಾನವನಗಳು,** ಮೈದಾನಗಳು ಹಾಗೂ ಕರೆಗಳ ಸ್ಥಿತಿಗತಿಯ ಕುರಿತಂತೆ ತಿಂಗಳೊಳಗೆ ವರದಿ ಸಲ್ಲಿಸುವಂತೆ ಬೆಂಗಳೂರು ಮಹಾನಗರ ಪಾಲಿಕೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ನಗರ ವ್ಯಾಪ್ತಿಯಲ್ಲಿ ಆಯೋಜಿಸಲಾದ 'ಮುಖ್ಯ ಆಯುಕ್ತರ ನಡೆ ವಲಯದ ಕಡೆ' ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಅವರು ಮಾತನಾಡಿದರು. ಪಾಲಿಕೆ ಅನುಮತಿಸಿದ ಸ್ಥಳಗಳಲ್ಲಿ ಮಾತ್ರ ವ್ಯಾಪಾರಿಗಳಿಗೆ ವ್ಯಾಪಾರ ಮಾಡಲು ಅವಕಾಶವಿದೆ. ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡು ವ್ಯಾಪಾರ ನಡೆಸುತ್ತಿರುವ ಶಾಶ್ವತ ಪೆಟ್ಟಿಗೆಗಳನ್ನು ತೆರವುಗೊಳಿಸಲಾಗುವುದು ಎಂದರು.

<><><>

**ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ** ರಾ.ಹ ದೇಶಪಾಂಡೆ ಸಭಾಭವನದಲ್ಲಿ 'ಕರ್ನಾಟಕ ದಾರ್ಶನಿಕ ಪಂಥಗಳು' ಉಪನ್ಯಾಸ ಸರಣಿ ಆಯೋಜಿಸಲಾಗಿದ್ದು, ಇಂದು ಸಂಜೆ 6 ಗಂಟೆಗೆ ಆರೂಢ ಪಂಥ ಕುರಿತು ಹೊಸಪೇಟೆಯ ಸಾಂಸ್ಕೃತಿಕ ಚಿಂತಕ, ಪ್ರೊಫೆಸರ್ ರಹಮತ್ ತರಿಕೇರಿ ಅವರು ಉಪನ್ಯಾಸ ನಡೆಸಿಕೊಡಲಿದ್ದಾರೆ.

<><><>

**ಬೆಳಗಾವಿ ವಿಚಾರದಲ್ಲಿ ಮಹಾಜನ್ ಆಯೋಗದ** ವರದಿಯೇ ಅಂತಿಮವಾಗಿದ್ದು, ಮಹಾರಾಷ್ಟ್ರದ ನಾಯಕರು ಪದೇ ಪದೇ ಜಿಲ್ಲೆಯನ್ನು ಮಹಾರಾಷ್ಟ್ರಕ್ಕೆ ಸೇರಿಸಬೇಕು ಎನ್ನುವುದು ಮೂರ್ಖತನದ ಪರಮಾವಧಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬೆಳಗಾವಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಮಹಾರಾಷ್ಟ್ರ ನಾಯಕರ ಬಾಲಿಶ ಹೇಳಿಕೆಗಳನ್ನು ರಾಜ್ಯ ಸರ್ಕಾರ ಸಹಿಸುವುದಿಲ್ಲ ಎಂದು ತಿಳಿಸಿದರು.

<><><>

**ರಾಜ್ಯ ಸರ್ಕಾರದ 'ನಮ್ಮ ಹೊಲ–ನಮ್ಮ ದಾರಿ'** ಯೋಜನೆಯ ಅನುಷ್ಠಾನದಲ್ಲಿ ನವಲಗುಂದ ವಿಧಾನಸಭಾ ಕ್ಷೇತ್ರ ಮಾದರಿಯಾಗಿದೆ ಎಂದು ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾರ ಬಿ.ಆರ್ ಪಾಟೀಲ್ ಹೇಳಿದರು.

ನವಲಗುಂದ ಕರೆಕಲ್ಲವ್ವನ ದಾರಿ ಹಾಗೂ ಆಶ್ರಯ ಬಡಾವಣೆಗೆ ಬೇಟಿ ನೀಡಿ ಅವರು ಮಾತನಾಡಿದರು. ಹೊಲಗಳಿಂದ ಹಳ್ಳಿಗೆ ಹಾಗೂ ಮಾರುಕಟ್ಟೆಗೆ ರೈತರು ಬೆಳೆಗಳನ್ನು ಸಾಗಿಸಲು ಈ ಯೋಜನೆ ಅನುಕೂಲವಾಗಿದೆ ಎಂದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>